## ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.899/2020

| | | | |
|---|---|---|---|
| ಸಾಕ್ಷಿದಾರರ ಹೆಸರು | - | ರಾಜಣ್ಣ | ಸಿಡಬ್ಲ್ಯೂ-4 |
| ತಂದೆಯ ಹೆಸರು | - | ಈರಣ್ಣ | ಪಿಡಬ್ಲ್ಯೂ-4 |
| ವಯಸ್ಸು | - | 58 ವರ್ಷ | |
| ಉದ್ಯೋಗ | - | ವ್ಯವಸಾಯ | |
| ವಾಸ | - | ಕೆ ಕೆ ಹಟ್ಟಿ ಗ್ರಾಮ | |

ದಿನಾಂಕಃ 13-05-2025 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ನನಗೆ ಚಾಸಾ.1, 3 ರವರು ಗೊತ್ತು. ಸಾಕ್ಷಿ ನಿಪಿ-3, 4 ರಲ್ಲಿರುವ ಸಹಿ ನೋಡಿ ಗುರುತಿಸಿದ್ದು ಸಹಿಗಳನ್ನು ನಿಪಿ-3(ಬಿ) ಮತ್ತು 4(ಬಿ) ಎಂದು ಗುರುತಿಸಲಾಯಿತು. ನಿಪಿ-3, 4 ಕ್ಕೆ 2019 ರಲ್ಲಿ ಹುಳಿಯಾರು ರಸ್ತೆಯಲ್ಲಿ ಅಪಘಾತವಾದ ವಿಚಾರವಾಗಿ ಸಹಿ ಮಾಡಿದ್ದೇನೆ. ಪೊಲೀಸರು ನನ್ನ ಸಮಕ್ಷಮ ಲಾರಿ ಮತ್ತು ಬೈಕನ್ನು ಅಮಾನತ್ತು ಪಡಿಸಿಕೊಂಡಿದ್ದಾರೆ. ನನ್ನ ಜೊತೆ ಚಾಸಾ1 ಮತ್ತು 3 ರವರು ಹಾಜರಿದ್ದರು. ಚಾಸಾ.1, 3 ರವರ ಸಹ ದಾಖಲೆಗಳಿಗೆ ಸಹಿ ಮಾಡಿದ್ದಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

ದಿಃ27.04.2019 ರಂದು ಬಡಗೊಲ್ಲರಹಟ್ಟಿ ಗೇಟ್ ಬಳಿ ಹೊರಕೇರಪ್ಪನವರ ಜಮೀನಿನ ಮುಂದೆ ದಾಖಲೆಗಳಿಗೆ ಸಹಿ ಮಾಡಿದ್ದೇನೆ ಎಂದರೆ ನಿಜ. ಕೆಎ 34 4167 ಲಾರಿ ಮತ್ತು ಟಿ ಎಸ್ ಎಕ್ಸ್ ಎಲ್ ನಂ.ಕೆಎ 44 ಯು 9046 ನ್ನು ವಶಪಡಿಸಿಕೊಂಡಿದ್ದರು ಎಂದರೆ ನಿಜ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಸಿ ಕೆ ವಕೀಲರಿಂದ–**

ಯಾವ ದಿನಾಂಕದಂದು ಮಹಜರ್ ಗೆ ಸಹಿ ಮಾಡಿದ್ದೇನೆ ಎಂದು ನೆನಪಿಲ್ಲ. ಸಂಜೆ 7.30 ರ ಸಮಯದಲ್ಲಿ ಸಹಿ ಮಾಡಿದ್ದೇನೆ. ನಿಪಿ–3, 4 ರಲ್ಲಿ ಬರೆದ ವಿಚಾರ ಗೊತ್ತಿಲ್ಲ. ಪೊಲೀಸರು ಸಹಿ ಮಾಡಲು ಹೇಳಿದ್ದರಿಂದ ದಾಖಲೆಗಳಿಗೆ ಸಹಿ ಮಾಡಿದ್ದೇನೆ ಎಂದರೆ ನಿಜ . ಮೃತ ಪ್ರೇಮಣ್ಣ ನನ್ನ ಸಂಬಂಧಿಕರು . ಪೊಲೀಸರು ಮಹಜರ್ ಮತ್ತು ನಕಾಶೆಯನ್ನು ನನ್ನ ಮುಂದೆ ತಯಾರಿಸಿಲ್ಲ ಎಂದರೆ ನಿಜ. ಮಹಜರ್ ಗೆ ಬರಲು ಪೊಲೀಸರು ನನಗೆ ನೋಟೀಸ್ ಕೊಟ್ಟಿದ್ದರೋ ಇಲ್ಲವೋ ನನಗೆ ಗೊತ್ತಿಲ್ಲ. ದಾಖಲೆಗಳಿಗೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ನಿಜ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಘಟನಾ ಸ್ಥಳಕ್ಕೆ ಹೋಗಿಲ್ಲ ಎಂದರೆ ಸರಿಯಲ್ಲ. ಮೃತ ಪ್ರೇಮಣ್ಣ ನನ್ನ ಸಂಬಂಧಿಕರಾಗಿದ್ದರಿಂದ ಪೊಲೀಸರ ಮಾತು ಕೇಳಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು